## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯ ತರಬೇತಿ ಕಾರ್ಯಕ್ರಮಗಳಲ್ಲಿ ಉಪನ್ಯಾಸ ನೀಡಲು ಭಾಗವಹಿಸುವ ಅತಿಥಿ ಉಪನ್ಯಾಸಕರಿಗೆ/ಸಂಪನ್ಮೂಲ ವ್ಯಕ್ತಿಗಳಿಗೆ ನೀಡುವ ಗೌರವಧನವನ್ನು ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶದ ಸಂಖ್ಯೆ: ಸಿಆಸುಇ(ಆಸು) 105 ಇಆಸು 2017, ದಿನಾಂಕ:24-07-2017.
2. ನಿರ್ದೇಶಕರು, ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ ಇವರ ಕಡತ ಸಂಖ್ಯೆ; ಸತಸಂ 01 ಸಿಬ್ಬಂದಿ 2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಆದೇಶದಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯ ಅತಿಥಿ ಉಪನ್ಯಾಸಕರಿಗೆ ಪ್ರತಿ 3 ಗಂಟೆಯ ಅವಧಿಯ ಉಪನ್ಯಾಸ ಕಾರ್ಯಕ್ರಮಕ್ಕೆ ಗೌರವ ಧನವನ್ನು ರೂ.1000/ಗಳಿಂದ ರೂ.1500/-ಗಳಿಗೆ ಹೆಚ್ಚಿಸಿ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಕಡತದಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯ ತರಬೇತಿ ಕಾರ್ಯಕ್ರಮಗಳಲ್ಲಿ ಉಪನ್ಯಾಸ ನೀಡಲು ಭಾಗವಹಿಸುವ ಅತಿಥಿ ಉಪನ್ಯಾಸಕರಿಗೆ/ಸಂಪನ್ಮೂಲ ವ್ಯಕ್ತಿಗಳಿಗೆ ನೀಡುವ ಗೌರವಧನವನ್ನು ಈಗಿರುವ ರೂ. 1500/- ಗಳಿಂದ ರೂ.4500/- ಹಾಗೂ ಸಾರಿಗೆ ವೆಚ್ಚವಾಗಿ 500/- ರೂಗಳನ್ನು ಹೆಚ್ಚಿಸುವಂತೆ ನಿರ್ದೇಶಕರು ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸು (ಆಸು) 19 ಇಆತ 2021,**
**ಬೆಂಗಳೂರು, ದಿನಾಂಕ: 03-12-2021.**

ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯ ತರಬೇತಿ ಕಾರ್ಯಕ್ರಮಗಳಲ್ಲಿ ತರಬೇತಿ ನೀಡಲು ಬರುವ ಅತಿಥಿ ಉಪನ್ಯಾಸಕರಿಗೆ/ಸಂಪನ್ಮೂಲ ವ್ಯಕ್ತಿಗಳಿಗೆ ಪ್ರತಿ 3 ಗಂಟೆಗೆ ಪ್ರಸಕ್ತ ಪಾವತಿಸುತ್ತಿರುವ ಗೌರವಧನವನ್ನು ರೂ.1500/- ಗಳಿಂದ ಪ್ರತಿ ಗಂಟೆಗೆ ರೂ.1500/-ರಂತೆ 3 ಗಂಟೆಯ ಅಧಿವೇಶನಕ್ಕೆ ರೂ.4500/- (ನಾಲ್ಕು ಸಾವಿರದ ಐದು ನೂರು ರೂಪಾಯಿಗಳು ಮಾತ್ರ) ಗೌರವಧನವನ್ನು ಹೆಚ್ಚಿಸಿ, ಆದೇಶ ಹೊರಡಿಸಿದ ದಿನಾಂಕದಿಂದ ಭವಿಷ್ಯಾವರ್ತಿಯಾಗಿ ಪಾವತಿಸಲು ಮಂಜೂರಾತಿ ನೀಡಲಾಗಿದೆ.

ಈ ಸಂಬಂಧ ತಗಲುವ ವೆಚ್ಚವನ್ನು ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಗೆ ವಾರ್ಷಿಕವಾಗಿ ಮಂಜೂರು ಮಾಡಲಾಗಿರುವ ಅನುದಾನದಿಂದಲೇ ಭರಿಸಲು ಸೂಚಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 271 ಸೇ-1/2017. ದಿನಾಂಕ: 18-11-2021 ರಲ್ಲಿ ನೀಡಿರುವ ಸಹಮತಿಯ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

3/12/2021

**(ರಂಗನಾಥ.ಜಿ)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಆಡಳಿತ ಸುಧಾರಣೆ-ತರಬೇತಿ).

135
3/12

**ಇವರಿಗೆ:**

1.ಮಹಾಲೇಖಪಾಲರು, (ಲೆಕ್ಕಪತ್ರ)/(ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2.ನಿರ್ದೇಶಕರು, ಸಚಿವಾಲಯ ತರಬೇತಿ ಸಂಸ್ಥೆ, ವಿ.ವಿ.ಗೋಪುರ, ಬೆಂಗಳೂರು.
3.ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-1) ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12) ವಿಧಾನಸೌಧ, ಬೆಂಗಳೂರು.
5.ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಸಿಆಸುಇ(ಆಸು)
6.ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಿಆಸುಇ(ಆಸು)
7.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.